# Bangalore
# Regional News
# 26.02.2025 / 2.30 P.M.
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

ಮುಖ್ಯಾಂಶಗಳು

1. ನಾಳೆಯಿಂದ ವಿಧಾನಸೌಧ ಆವರಣದಲ್ಲಿ ಪುಸ್ತಕ ಮೇಳ – ವಿಧಾನಸಭಾಧ್ಯಕ್ಷ ಯು.ಟಿ.ಖಾದರ್ ಸಿದ್ಧತಾ ಕಾರ್ಯ ಪರಿಶೀಲನೆ
2. ಈ ಬಾರಿ ಅದ್ದೂರಿ ಹಂಪಿ ಉತ್ಸವ ಆಚರಿಸಲು ನಿರ್ಧಾರ – ಸಚಿವ ಜಮೀರ್ ಅಹ್ಮದ್ ಖಾನ್
3. ರಾಜ್ಯದ ವಿವಿಧೆಡೆ ಶಿವರಾತ್ರಿ ಸಡಗರ–ಶಿವದೇವಾಲಯಗಳಲ್ಲಿ ವಿಶೇಷ ಪೂಜೆ
4. ಕರಾವಳಿ ಕರ್ನಾಟಕ ಭಾಗದಲ್ಲಿ ಮುಂದಿನ ಮೂರು ದಿನಗಳ ಕಾಲ ಬಿಸಲ ತಾಪಮಾನ – ಹವಾಮಾನ ಇಲಾಖೆ ಮುನ್ಸೂಚನೆ

***************

ವಿಧಾನಸೌಧ ಆವರಣದಲ್ಲಿ ಇದೇ ಮೊಟ್ಟ ಮೊದಲ ಬಾರಿಗೆ ಪುಸ್ತಕ ಮೇಳ ನಾಳೆಯಿಂದ ಮಾರ್ಚ್ 2 ರವರೆಗೆ ನಾಲ್ಕು ದಿನಗಳ ಕಾಲ ಆಯೋಜನೆ ಮಾಡಲಾಗಿದ್ದು, ಸಾರ್ವಜನಿಕರಿಗೆ ಮುಕ್ತ ಅವಕಾಶ ನೀಡಲಾಗಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ನಾಳೆ ಸಂಜೆ ಬೃಹತ್ ಪುಸ್ತಕ ಮೇಳವನ್ನು ಉಧ್ಘಾಟನೆ ಮಾಡಲಿದ್ದಾರೆ. ಕಾರ್ಯಕ್ರಮದಲ್ಲಿ ಅನೇಕ ಬರಹಗಾರರು ತಮ್ಮ ಕೃತಿಗಳನ್ನು ಬಿಡುಗಡೆ ಮಾಡಲಿದ್ದಾರೆ. ಮಕ್ಕಳ ಸಾಹಿತ್ಯ, ಸಿನಿಮಾ, ಸಂವಿಧಾನ ಮತ್ತು ಕನ್ನಡ ಸಾಹಿತ್ಯದಂತಹ ವಿಷಯಗಳ ಕುರಿತು ಬರಹಗಾರರು ಮತ್ತು ತಜ್ಞರೊಂದಿಗೆ ಪ್ರತಿದಿನ ಸಂವಾದ ನಡೆಯಲಿದೆ.

ಶಾಲೆಗಳಿಂದ ಬರುವ ಮಕ್ಕಳಿಗೆ ವಿಧಾನಸಭೆ ಸಭಾಂಗಣಗಳಿಗೆ ಭೇಟಿಗೆ ನೀಡಲು ಅವಕಾಶ ನೀಡಲು ನಿರ್ಧರಿಸಲಾಗಿದೆ.

ಈ ಹಿನ್ನೆಲೆಯಲ್ಲಿ ವಿಧಾನಸೌಧದ ಆವರಣದಲ್ಲಿ ಆಯೋಜಿಸಿರುವ ಪುಸ್ತಕ ಮೇಳದ ಸಿದ್ಧತಾ ಕಾರ್ಯವನ್ನು ಸಭಾಧ್ಯಕ್ಷರಾದ ಯು.ಟಿ.ಖಾದರ್ ಪರಿಶೀಲನೆ ನಡೆಸಿದರು.

ಈ ವೇಳೆ ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ವಿಧಾನಸಭೆ ಕಾರ್ಯಾದರ್ಶಿ ಎಂ.ಕೆ.ವಿಶಾಲಾಕ್ಷಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

***************

ಹಂಪಿ ಉತ್ಸವವನ್ನು ಈ ಬಾರಿ ಅದ್ದೂರಿಯಾಗಿ ಆಚರಿಸಲು ನಿರ್ಧರಿಸಲಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಜಮೀರ್ ಅಹ್ಮದ್ ಖಾನ್ ತಿಳಿಸಿದ್ದಾರೆ. ವಿಜಯನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹಂಪಿ ಉತ್ಸವವು ನಾಡಹಬ್ಬವಿದ್ದಂತೆ. ಎಲ್ಲಾ ಜಿಲ್ಲಾ ಮಟ್ಟದ ಅಧಿಕಾರಿಗಳು ಹಂಪಿ ಉತ್ಸವಕ್ಕೆ ಸಹಕರಿಸುವಂತೆ ಮನವಿ ಮಾಡಿದ್ದಾರೆ.

ಇದೇ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಎಂ.ಎಸ್.ದಿವಾಕರ್ ಮಾತನಾಡಿ, ಉತ್ಸವದ ಸಿದ್ಧತೆಯ ಬಗ್ಗೆ ಮಾಹಿತಿ ನೀಡಿದರು.

ಹಂಪಿ ಉತ್ಸವವು ವ್ಯವಸ್ಥಿತವಾಗಿ ನಡೆಯಲು ಬೇಕಾದ ಎಲ್ಲಾ ವ್ಯವಸ್ಥೆ ಮಾಡಲಾಗಿದೆ. ಇದೇ ಮೊದಲ ಬಾರಿಗೆ ಉತ್ಸವದಲ್ಲಿ ಕಮಲಾಪುರದ ಕೆರೆಯಲ್ಲಿ ದೋಣಿ ವಿಹಾರ ವ್ಯವಸ್ಥೆ ಮಾಡಲಾಗಿದೆ ಎಂದು ತಿಳಿಸಿದ್ದಾರೆ.

***************

ರಾಜ್ಯದ ಪ್ರವಾಸೋದ್ಯಮವನ್ನು ವಿಶ್ವಕ್ಕೆ ಪರಿಚಯಿಸುವ ಉದ್ದೇಶದಿಂದ ಇಂದಿನಿಂದ ಇದೇ 28ರವರೆಗೆ ಮೂರು ದಿನಗಳ ಕಾಲ ಕರ್ನಾಟಕ ಅಂತಾರಾಷ್ಟ್ರಿಯ ಪ್ರವಾಸೋದ್ಯಮ ಸಮ್ಮೇಳನ – ಕೈಟ್ – 2025 ಬೆಂಗಳೂರಿನಲ್ಲಿ ನಡೆಯಲಿದೆ.

ಕಾರ್ಯಕ್ರಮವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಸಂಜೆ ಉದ್ಘಾಟನೆ ಮಾಡಲಿದ್ದು, ಕೇಂದ್ರ ಪ್ರವಾಸೋದ್ಯಮ ಇಲಾಖೆಯು ಪಾಲ್ಗೊಳ್ಳಲಿದೆ. ಪ್ರತಿವರ್ಷ ರಾಜ್ಯಕ್ಕೆ ಒಂದು ಕೋಟಿ 25 ಲಕ್ಷಕ್ಕೂ ಅಧಿಕ ಪ್ರವಾಸಿಗರು ಆಗಮಿಸುತ್ತಿದ್ದು, ಇನ್ನೂ ಹೆಚ್ಚಿನ ಸಂಖ್ಯೆಯಲ್ಲಿ ಪ್ರವಾಸಿಗರನ್ನು ಆಕರ್ಷಿಸುವ ಉದ್ದೇಶದಿಂದ ಸಮ್ಮೇಳನ ಆಯೋಜಿಸಲಾಗಿದೆ.

ಇಂದಿನ ಪೀಳಿಗೆಗೆ ಪ್ರವಾಸೋದ್ಯಮ ಕ್ಷೇತ್ರಗಳ ಮಹತ್ವವನ್ನು ತಿಳಿಸಲು ಪ್ರವಾಸೋದ್ಯಮ ಸಮ್ಮೇಳನದಲ್ಲಿ ನಿರ್ಧರಿಸಲಾಗಿದೆ. ಪ್ರವಾಸಿಗರ ಸಂಖ್ಯೆಯನ್ನು ಹೆಚ್ಚಿಸುವುದು, ಸ್ಥಳೀಯರಿಗೆ ಉದ್ಯೋಗಾವಕಾಶ ಹೆಚ್ಚಳಕ್ಕೂ ಆದ್ಯತೆ ನೀಡಲಾಗಿದೆ.

***************

ಬೆಂಗಳೂರಿನಲ್ಲಿ ನಾಳೆಯಿಂದ ಮೂರು ದಿನಗಳ ಕಾಲ ಗೆಫೆಕ್ಸ್ ಶೃಂಗಸಭೆ ನಡೆಯಲಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಶೃಂಗಸಭೆಯನ್ನು ಉದ್ಘಾಟಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಕೇಂದ್ರ ಸರ್ಕಾರ ಪ್ರಸಾರ ಮತ್ತು ತಂತ್ರಜ್ಞಾನ ಸಚಿವಾಲಯದ ಕಾರ್ಯದರ್ಶಿ ಸಂಜಯ್ ಜಾಜು ಭಾಗವಹಿಸಲಿದ್ದಾರೆ.

ಸುಮಾರು 20 ಸಾವಿರಕ್ಕೂ ಅಧಿಕ ಮಂದಿ ಈ ಶೃಂಗಸಭೆಯಲ್ಲಿ ಭಾಗವಹಿಸುವ ನಿರೀಕ್ಷೆಯಿದೆ. ಕರ್ನಾಟಕದ ಮಾಹಿತಿ ತಂತ್ರಜ್ಞಾನ ಇಲಾಖೆ  ಆಯೋಜಿಸಿರುವ ಭಾರತದ ಪ್ರಧಾನ ಎವಿಜಿಸಿ-ಎಕ್ಸ್‌ಆರ್ (AVGC-XR) ಸಮ್ಮೇಳನವು ಅನಿಮೇಶನ್, ದೃಶ್ಯಪರಿಣಾಮಗಳು, ಗೇಮಿಂಗ್, ಕಾಮಿಕ್ಸ್ ಮತ್ತು ಸಂವಹನ ತಂತ್ರಜ್ಞಾನದ ಬಗ್ಗೆ ಬೆಳಕು ಚೆಲ್ಲಲಿದೆ. ಇದೇ 27ರಿಂದ ಮಾರ್ಚ್ 1ರವರೆಗೆ ಸಮ್ಮೇಳನ ಆಯೋಜಿಸಲಾಗಿದೆ.

***************

ಶಕ್ತಿ ಯೋಜನೆಯು ಕರುನಾಡಿನಲ್ಲಿ ಶಕ್ತಿ ಸಂಚಾರವನ್ನೇ ಸೃಷ್ಟಿಸಿದೆ. ನಾಡಿನ ಸ್ವಾಭಿಮಾನಿ ಮಹಿಳೆಯರನ್ನು ಸ್ವಾವಲಂಬಿಗಳನ್ನಾಗಿಸುವ ಉದ್ದೇಶದೊಂದಿಗೆ ಜಾರಿಗೆ ತಂದ ಶಕ್ತಿ ತನ್ನ ಗುರಿಯನ್ನು ಯಶಸ್ವಿಯಾಗಿ ಈಡೇರಿಸುತ್ತಾ ಮುನ್ನಡೆಯುತ್ತಿರುವುದು ಯೋಜನೆಯ ಯಶಸ್ಸಿಗೆ ಹಿಡಿದಿರುವ ಕೈಗನ್ನಡಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿದ್ದಾರೆ.
ಶಕ್ತಿ ಯೋಜನೆ ಜಾರಿಗೊಂಡ ನಂತರದಿಂದ 400 ಕೋಟಿ ಬಾರಿ ಮಹಿಳೆಯರು ಉಚಿತ ಪ್ರಯಾಣದ ಸೌಲಭ್ಯ ಪಡೆದು ಸ್ವಾವಲಂಬಿ ಬದುಕಿನೆಡೆಗೆ ಮುಂದಡಿಯಿಟ್ಟಿದ್ದಾರೆ. ಈವರೆಗಿನ ಒಟ್ಟು ಟಿಕೆಟ್ ಮೌಲ್ಯ ರೂ.9,803 ಕೋಟಿ ಆಗಿದ್ದು, ಮಹಿಳಾ ಸಬಲೀಕರಣದ ನಿಟ್ಟಿನಲ್ಲಿ ಶಕ್ತಿಯೋಜನೆ ನವ ಇತಿಹಾಸ ಸೃಷ್ಟಿಸಿದೆ ಎಂದು ಹೇಳಿದ್ದಾರೆ.

***************

ಮಹಾಶಿವರಾತ್ರಿಯ ಶುಭ ಸಂದರ್ಭದಲ್ಲಿ ಇಂದು ಪ್ರಯಾಗ್‌ರಾಜ್‌ನಲ್ಲಿ ಮಹಾಕುಂಭ ಮೇಳದ ಅಂತಿಮ ಅಮೃತ ಸ್ನಾನ ನೆರವೇರಲಿದೆ.

ಭಾರೀ ಜನದಟ್ಟಣೆಯಾಗುವ ಸಾಧ್ಯತೆ ಇರುವುದರಿಂದ ಉತ್ತರ ಮಧ್ಯ ರೈಲ್ವೆ, ಈಶಾನ್ಯ ರೈಲ್ವೆ, ಉತ್ತರ ರೈಲ್ವೆ ವ್ಯಾಪಕ ಸಿದ್ಧತೆ ಮಾಡಿಕೊಂಡಿದೆ. ಈ ಹಿನ್ನೆಲೆಯಲ್ಲಿ ರೈಲ್ವೆ ಇಲಾಖೆ ಪ್ರಯಾಗ್‌ರಾಜ್‌ನಿಂದ 350ಕ್ಕೂ ಹೆಚ್ಚು ರೈಲುಗಳನ್ನು ಓಡಿಸಲು ನಿರ್ಧರಿಸಿದೆ.

ಅಗತ್ಯವಿದ್ದರೆ, ಹೆಚ್ಚುವರಿ ವಿಶೇಷ ರೈಲುಗಳನ್ನು ಓಡಿಸಲು ರೈಲ್ವೆ ಸಚಿವ ಅಶ್ವಿನಿ ವೈಷ್ಣವ್, ರೈಲ್ವೆ ಮಂಡಳಿ ಅಧ್ಯಕ್ಷರು, ಎಲ್ಲಾ ರೈಲ್ವೆ ವಲಯಗಳ ಪ್ರದಾನ ವ್ಯವಸ್ಥಾಪಕರಿಗೆ ಸೂಚನೆ ನೀಡಿದ್ದಾರೆ.

***************

ಇಂದು ಮಹಾಶಿವರಾತ್ರಿ ಹಬ್ಬವನ್ನು ದೇಶದೆಲ್ಲೆಡೆ ಸಡಗರದಿಂದ ಆಚರಿಸಲಾಗುತ್ತಿದೆ.

ದೇಶದ ಜನತೆಗೆ ಗಣ್ಯರು ಮಹಾಶಿವರಾತ್ರಿ ಹಬ್ಬದ ಹಿನ್ನೆಲೆಯಲ್ಲಿ ಶುಭ ಕೋರಿದ್ದಾರೆ. ರಾಷ್ಟ್ರಪತಿ ದ್ರೌಪತಿ ಮುರ್ಮು, ಉಪಾರಾಷ್ಟ್ರಪತಿ ಜಗದೀಪ್ ಧನಕರ್ ಹಾಗೂ ಪ್ರಧಾನಿ ನರೇಂದ್ರ ಮೋದಿ ಶುಭ ಹಾರೈಸಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನಾಡಿನ ಜನತೆಗೆ ಶುಭಾಶಯ ಕೋರಿದ್ದಾರೆ.

***************

ರಾಜ್ಯದ ವಿವಿಧೆಡೆ ಮಹಾ ಶಿವರಾತ್ರಿಯ ಅಂಗವಾಗಿ ದೇವಾಲಯಗಳಲ್ಲಿ ವಿಶೇಷ ಪೂಜೆ ನಡೆಯುತ್ತಿದೆ.
ಉತ್ತರಕನ್ನಡ ಜಿಲ್ಲೆಯಲ್ಲಿ ಅತ್ಯಂತ ಶ್ರದ್ಧಾ ಭಕ್ತಿಯಿಂದ ಮಹಾ ಶಿವರಾತ್ರಿಯನ್ನು ಆಚರಿಸಲಾಗುತ್ತಿದೆ. ಪುರಾಣ ಪ್ರಸಿದ್ಧ ಗೋಕರ್ಣದಲ್ಲಿ ಮಹಾಬಲೇಶ್ವರನಿಗೆ ಅಭಿಷೇಕ, ಪೂಜೆ ಸಲ್ಲಿಸಲು ಹೊರ ಜಿಲ್ಲೆ, ಹೊರ ರಾಜ್ಯಗಳಿಂದಲೂ ಸಹಸ್ರಾರು ಸಂಖ್ಯೆಯಲ್ಲಿ ಭಕ್ತರು ಆಗಮಿಸಿದ್ದಾರೆ.
ಕೋಲಾರ ಜಿಲ್ಲೆಯಾದ್ಯಂತ ಮಹಾ ಶಿವರಾತ್ರಿ ಹಬ್ಬವನ್ನು ಶ್ರದ್ಧಾ ಭಕ್ತಿಯಿಂದ ಆಚರಿಸಲಾಗುತ್ತಿದೆ. ದಕ್ಷಿಣ ಕಾಶಿಯೆಂದೇ ಹೆಸರಾಗಿರುವ ಅಂತರಗಂಗೆ, ಕೋಟಿ ಲಿಂಗೇಶ್ವರ ದೇವಸ್ಥಾನದಲ್ಲಿ ವಿಶೇಷ ಪೂಜಾ ಕೈಂಕರ್ಯಗಳು ಜರುಗುತ್ತಿದ್ದು, ಕೋಟಿಲಿಂಗ ದೇವಸ್ಥಾನದಲ್ಲಿ  ಬ್ರಹ್ಮ ರಥೋತ್ಸವ ನಡೆಯಲಿದೆ.

ಕೋಲಾರ ತಾಲ್ಲೂಕಿನ ಕೊರಗಂಡಹಳ್ಳಿ ಗ್ರಾಮದಲ್ಲಿರುವ ಕಾಶಿವಿಶ್ವನಾಥ ದೇವಸ್ಥಾನದಲ್ಲಿ ಅಭಿಷೇಕದ ವೇಳೆ ಶಿವಲಿಂಗದ ಮೇಲೆ ಸೂರ್ಯ ರಶ್ಮಿ ಹಾದು ಹೋಗುವ ಮೂಲಕ ಪ್ರಕೃತಿಯ ವಿಸ್ಮಯಕ್ಕೆ ಸಾಕ್ಷಿಯಾಯಿತು.

ಚಿತ್ರದುರ್ಗ ನಗರ ನೀಲಕಂಠೇಶ್ವರ ದೇವಸ್ಥಾನ ಪಾತಾಳೇಶ್ವರ , ಬಸವೇಶ್ವರ ಮತ್ತು ಚಂದ್ರವಳ್ಳಿಯ ಪಂಚಲಿಂಗಗಳಲ್ಲಿ ಮುಂಜಾನೆ ರುದ್ರಾಭಿಷೇಕ ಮತ್ತು ವಿಶೇಷ ಪೂಜೆ ನೆರವೇರಿತು.

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ, ದೇವನಹಳ್ಳಿ, ನೆಲಮಂಗಲ, ಹೊಸಕೋಟೆ ತಾಲೂಕುಗಳಲ್ಲಿ ಜನತೆ ಶ್ರದ್ಧಾ ಭಕ್ತಿ, ಸಂಭ್ರಮದಿಂದ ಶಿವರಾತ್ರಿ ಆಚರಿಸುತ್ತಿದ್ದಾರೆ.

ವಿಜಯಪುರದ ಶಿವಗಿರಿಯಲ್ಲಿರುವ ಬೃಹತ್ ಶಿವನ ಪೂರ್ತಿಗೆ ವಿಶೇಷ ಪೂಜೆ ನೆರವೇರಿಸಲಾಗಿದೆ. ದೇವಸ್ಥಾನಗಳ ಮುಂದೆ ಭಕ್ತರು ಸಾಲುಗಟ್ಟಿ ನಿಂತು ಶಿವನ ದರ್ಶನ ಪಡೆಯುತ್ತಿದ್ದಾರೆ.

ಮಹಾಶಿವರಾತ್ರಿ ಹಬ್ಬದ ಪ್ರಯುಕ್ತ ಚಿಕ್ಕಬಳ್ಳಾಪುರ ತಾಲ್ಲೂಕಿನ ನಂದಿ ಗ್ರಾಮದ ಭೋಗ ನಂದೀಶ್ವರಸ್ವಾಮಿ ಹಾಗೂ ನಂದಿಬೆಟ್ಟದ ಯೋಗ ನಂದೀಶ್ವರ ದೇವಾಲಯದಲ್ಲಿ ವಿಶೇಷ ಪೂಜೆ ನೆರವೇರಿತು.

ಬಳ್ಳಾರಿ ನಗರದ ಆರಾಧ್ಯದೈವ ಕೋಟೆ ಮಲ್ಲೇಶ್ವರ ದೇವಸ್ಥಾನಕ್ಕೆ ಸಾವಿರಾರು ಭಕ್ತರು ಬೆಳಿಗ್ಗೆಯಿಂದ ಸಾಲಾಗಿ ಬಂದು ದೇವರ ದರ್ಶನ ಪಡೆದರು.

***************

ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿ ಪ್ರಸಕ್ತ ಸಾಲಿನ ಮುಂಗಾರು ಹಂಗಾಮಿನ ಎಫ್.ಎ.ಕ್ಯೂ. ಗುಣಮಟ್ಟದ ತೊಗರಿ ಖರೀದಿಸಲು ಕೂಡಲೇ ನೋಂದಣಿ ಮಾಡಿಸುವಂತೆ ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ರೈತರಲ್ಲಿ ಮನವಿ ಮಾಡಿದ್ದಾರೆ.

ಪ್ರತಿ ಕ್ವಿಂಟಾಲ್ ತೊಗರಿಗೆ ಕೇಂದ್ರ ಸರ್ಕಾರ 7 ಸಾವಿರದ 550 ರೂಪಾಯಿ ದರ ನಿಗದಿ ಮಾಡಿದ್ದು ಇದಕ್ಕೆ ಕರ್ನಾಟಕ ರಾಜ್ಯ ಸರ್ಕಾರವು ಪ್ರತಿ ಕ್ವಿಂಟಾಲ್‌ಗೆ 450 ರೂಪಾಯಿ ಪ್ರೋತ್ಸಾಹ ಧನ ನೀಡುವುದಾಗಿ ಘೋಷಿಸಿದೆ. ಹೀಗಾಗಿ ಪ್ರತಿ ಕ್ವಿಂಟಾಲ್‌ಗೆ 8,000 ರೂಪಾಯಿಗಳಂತೆ ಪ್ರತಿ ಎಕರೆಗೆ 4 ಕ್ವಿಂಟಾಲ್‌ನಂತೆ ಪ್ರತಿ ರೈತರಿಂದ ಗರಿಷ್ಠ 40 ಕ್ವಿಂಟಾಲ್ ತೊಗರಿ ಖರೀದಿಗೆ ನಿರ್ಧರಿಸಲಾಗಿದೆ. ಹಣವನ್ನು ಡಿ.ಬಿ.ಟಿ ಮೂಲಕ ರೈತರ ಬ್ಯಾಂಕ್ ಖಾತೆಗೆ ನೇರವಾಗಿ ಜಮಾ ಮಾಡಲಾಗುವುದು ಎಂದು ಅವರು ತಿಳಿಸಿದ್ದಾರೆ.

***************

ವಿಜಯಪುರ ಜಿಲ್ಲೆಯಲ್ಲಿ ಉತ್ತಮವಾದ ಮಾಲ್ದಂಡಿ ಜೋಳ ಬೆಳೆಯುತ್ತಿದ್ದು ಬೆಂಬಲ ಬೆಲೆ ಯೋಜನೆಯಡಿ ಬಿಳಿ ಜೋಳ ಖರೀದಿಸುವ ಕುರಿತು ಜಿಲ್ಲೆಯ ರೈತರಲ್ಲಿ ಸೂಕ್ತ ತಿಳುವಳಿಕೆ ಹಾಗೂ ಜಾಗೃತಿ ಮೂಡಿಸುವಂತೆ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

***************

ಕೊಂಕಣ ಮತ್ತು ಗೋವಾ, ಕರಾವಳಿ ಕರ್ನಾಟಕದಲ್ಲಿಂದು ಬಿಸಿ ಅಲೆಯ ವಾತಾವರಣ ಇರಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಕರಾವಳಿ ಕರ್ನಾಟಕದಲ್ಲಿ ಮುಂದಿನ 2–3 ದಿನಗಳವರೆಗೆ ಬಿಸಿ ಅಲೆಯ ವಾತಾವರಣ ಮುಂದುವರಿಯುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಕಳೆದ ಕೆಲವು ದಿನಗಳಿಂದ ಕರಾವಳಿ ಭಾಗ ತಾಪಮಾನದಲ್ಲಿ ಭಾರೀ ಹೆಚ್ಚಳ ಕಂಡು ಬಂದಿದೆ. ಇಂದು ಮತ್ತು ನಾಳೆ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಬಿಸಿ ಗಾಳಿ ಬೀಸಲಿದೆ ಎಂದು ಹವಾಮಾನ ಇಲಾಖೆ ಎಚ್ಚರಿಕೆ ನೀಡಿದೆ.

***************

<u>ಸಂಕ್ಷಿಪ್ತ ಸುದ್ದಿಗಳು</u>

1. ಚಲನಚಿತ್ರ ಅಕಾಡೆಮಿ ಅಧ್ಯಕ್ಷರಾದ ಸಾಧು ಕೋಕಿಲಾ ಇಂದು 16ನೇ ಬೆಂಗಳೂರು ಅಂತಾರಾಷ್ಟ್ರೀಯ ಚಲನಚಿತ್ರೋತ್ಸವದ ಉದ್ಘಾಟನೆಗೆ ಮುಖ್ಯಮಂತ್ರಿ ಅವರನ್ನು ಆಹ್ವಾನಿಸಿ, ಆಹ್ವಾನ ಪತ್ರಿಕೆ ನೀಡಿದರು. ಸರ್ಕಾರದ ಕಾರ್ಯದರ್ಶಿ ಬಿ.ಬಿ.ಕಾವೇರಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ನಿರ್ದೇಶಕಿ ಡಾ.ಕೆ.ಧರಣೀದೇವಿ ಅವರು ಉಪಸ್ಥಿತರಿದ್ದರು

2. ಚಿಕ್ಕಬಳ್ಳಾಪುರ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಯೂ ಡಾ.ಎನ್.ಮಂಜುಳಾ ನಾಡಿದ್ದು, ಚಿಕ್ಕಬಳ್ಳಾಪುರ ಜಿಲ್ಲಾ ಪಂಚಾಯತ್‌ನ ಸಭಾಂಗಣದಲ್ಲಿ ಜಿಲ್ಲೆಯ ಪ್ರಗತಿ ಪರಿಶೀಲನಾ ಸಭೆ ನಡೆಸಲಿದ್ದಾರೆ ಎಂದು ಜಿಲ್ಲಾ ಪಂಚಾಯತ್ ಪ್ರಕಟಣೆ ತಿಳಿಸಿದೆ.